# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಂ.ಜಿ.ಹಿರೇಮಠ್, ವಿಚಾರಣಾಧಿಕಾರಿಗಳು ಹಾಗೂ ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು - ಸಂಭಾವನೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂ. ಸಿಆಸುಇ 6 ಸೇಇವಿ 2010, ದಿನಾಂಕ 20-04-2011.
2. ಸರ್ಕಾರದ ಆದೇಶ ಸಂ. ಗ್ರಾಅಪ 14 ಇಎನ್‌ಕ್ಯೂ 2009 ದಿನಾಂಕ 29.01.2014
3. ವಿಚಾರಣಾಧಿಕಾರಿಯವರ ವರದಿ ದಿನಾಂಕ 02.03.2016

ಪ್ರಸ್ತಾವನೆ:

ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 15,000-00 ಗಳ ಸಂಭಾವನೆಯನ್ನು ಪಾವತಿಸಲು ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ದಿನಾಂಕ 20-04-2011ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಚಿತ್ರದುರ್ಗ ಜಿಲ್ಲೆ, ಹಿರಿಯೂರು ತಾಲ್ಲೂಕು, ಉಡುವಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜಲಾನಯನ ಇಲಾಖೆಯಿಂದ ನಿರ್ವಹಿಸಲಾಗಿದ್ದ ಕಾಮಗಾರಿಗಳನ್ನು ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಿರ್ವಹಿಸಿರುವ ಹಾಗೆ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಅವ್ಯವಹಾರ ಎಸಗಿರುವ ಆರೋಪಕ್ಕೆ ಸಂಬಂಧಿಸಿದಂತೆ ಶ್ರೀ ಎಸ್.ಎನ್.ಅಶೋಕರೆಡ್ಡಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರಿಯೂರು ಇವರ ವಿರುದ್ಧ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಎಂ.ಜಿ.ಹಿರೇಮಠ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ದಿನಾಂಕ 29.01.2014ರ ಆದೇಶದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ ಮೇಲೆ ಕ್ರಮಾಂಕ (3)ರಲ್ಲಿ ಓದಲಾದಂತೆ ದಿನಾಂಕ 02.03.2016ರಂದು ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಆದುದರಿಂದ, ವಿಚಾರಣಾಧಿಕಾರಿಗೆ ನಿಯಮಾನುಸಾರ ಸಂಭಾವನೆ / ಭತ್ಯೆ ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

ಆದೇಶ ಸಂಖ್ಯೆ ಗ್ರಾಅಪ 14 ಇಎನ್‌ಕ್ಯೂ 2009 ಬೆಂಗಳೂರು, ದಿನಾಂಕ. 11.05.2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಎಂ.ಜಿ.ಹಿರೇಮಠ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರು ಸರ್ಕಾರದ ಆದೇಶದಂತೆ ಇಲಾಖಾ ವಿಚಾರಣೆ ಜರುಗಿಸಿ

ಮು.ತಿ.ನೋ.

ವರದಿ ಸಲ್ಲಿಸಿರುವುದರಿಂದ ಸರ್ಕಾರದ ಆದೇಶ ಸಂ. ಸಿಆಸುಇ 6 ಸೇಇವಿ 2010, ದಿನಾಂಕ 20-04-2011ರ ಅನುಸಾರ ಸಂಚಿತ ಸಂಭಾವನೆ ರೂ. 15,000-00 [( ಹದಿನೈದು ಸಾವಿರ ರೂ.ಗಳು ಮಾತ್ರ) / (ವಾಹನ ಭತ್ಯೆಯೂ ಸೇರಿದಂತೆ)] ಗಳನ್ನು ಮಂಜೂರು ಮಾಡಿದೆ. ಸದರಿ ಮೊತ್ತವನ್ನು ಪಾವತಿಸಲು ಕೂಡಲೇ ಕ್ರಮವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಇವರಿಗೆ ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

11/05/2017
(ಎಸ್.ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, (ಆಡಿಟ್ ಮತ್ತು ಅಕೌಂಟ್ಸ್), ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ - ಸದರಿ ವಿಚಾರಣಾಧಿಕಾರಿಯವರ ಹೆಸರಿಗೆ ಚೆಕ್‌ನ್ನು ಬರೆದು ಅವರ ವಿಳಾಸಕ್ಕೆ ನೋಂದಣಿ ಅಂಚೆ ಮುಖಾಂತರ ಕಳುಹಿಸುವಂತೆ ಕೋರಿದೆ.
3. ಶ್ರೀ ಎಂ.ಜಿ.ಹಿರೇಮಠ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ. 746, 15ನೇ ಮೇನ್, ಜುಡಿಷಿಯಲ್ ಲೇಔಟ್, ಅಲ್ಲಾಳಸಂದ್ರ, ಜಿ.ಕೆ.ವಿ.ಕೆ. ಪೋಸ್ಟ್, ಬೆಂಗಳೂರು - 65 (ದೂರವಾಣಿ ಸಂಖ್ಯೆ 28565970)
4. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿತ್ರದುರ್ಗ.
5. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
6. ಹೆಚ್ಚುವರಿ ಪ್ರತಿ:ರಕ್ಷಾ ಕಡತ: ಕಂಪ್ಯೂಟರ್ ಶಾಖೆ.